ಕರ್ನಾಟಕ ಸರ್ಕಾರ

**ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಇವರ ನಡವಳಿಗಳು**

ವಿಷಯ: ಡಾ॥ ಕೋಮಲ ಕೆ.ಪಿ., ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಶಾಂತಿನಗರ, ಮೈಸೂರು, ಮೈಸೂರು ಜಿಲ್ಲೆ ಇವರನ್ನು ಕರ್ತವ್ಯಲೋಪ/ ದುರ್ನಡತೆಯ ಆರೋಪದ ಮೇರೆಗೆ ಸರ್ಕಾರಿ ಸೇವೆಯಿಂದ ಅಮಾನತ್ತುಗೊಳಿಸುವ ಬಗ್ಗೆ.

ಓದಲಾಗಿದೆ: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಮೈಸೂರು ಜಿಲ್ಲೆ ಇವರ ಪತ್ರ ಸಂಖ್ಯೆ: ಸಿವಿ(01)19/2023-24 ದಿನಾಂಕ 28-06-2023.

**ಪ್ರಸ್ತಾವನೆ:-**

ಡಾ॥ ಕೋಮಲ ಕೆ.ಪಿ., ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಶಾಂತಿನಗರ, ಮೈಸೂರು, ಮೈಸೂರು ಜಿಲ್ಲೆ ಇವರು ರೋಗಿಗಳಿಗೆ ಚಿಕಿತ್ಸೆ ಹಾಗೂ ಔಷಧಿಗಳನ್ನು ನೀಡಲು ಹಣ ಪಡೆದಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಡಿರುತ್ತದೆ.

ಮೇಲೆ ಓದಲಾದ ವರದಿಯಲ್ಲಿ ಸದರಿ ವೈದ್ಯರು ಆಸ್ಪತ್ರೆಗೆ ಚಿಕಿತ್ಸೆಗೆ ಬರುವ ರೋಗಿಗಳಿಂದ ಹಣ ಪಡೆದಿರುವ ಬಗ್ಗೆ ಸಮಾಜಿಕ ಜಾಲತಾಣದಲ್ಲಿ ಹರಡಿರುವುದು ತಿಳಿಸಿದ್ದು, ಸದರಿ ವರದಿಯನ್ನು ಪರಿಶೀಲಿಸಲಾಗಿ, ಸರ್ಕಾರದಿಂದ ಸಾರ್ವಜನಿಕರಿಗೆ ಉಚಿತವಾಗಿ ಔಷಧಿ ಮತ್ತು ಪರಿಕರಗಳನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನ ಮತ್ತು ಎ.ಬಿ.ಎ.ಆರ್.ಕೆ ಅಡಿ ಸಾಕಷ್ಟು ಸೌಲಭ್ಯಗಳನ್ನು ಒದಗಿಸಿದ್ದರೂ ಸಹ ವೈದ್ಯರು ಚಿಕಿತ್ಸೆಗೆ ಬರುವ ರೋಗಿಗಳಿಂದ ಹಣ ಪಡೆಯುತ್ತಿರುವುದು ಮೇಲ್ನೋಟಕ್ಕೆ ಸಾಬೀತಾಗಿರುತ್ತದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಮೈಸೂರು ಇವರು ವರದಿಯನ್ನು ಸಲ್ಲಿಸಿ, ಶಿಸ್ತು ಕ್ರಮಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ವೈದ್ಯರು ಚಿಕಿತ್ಸೆ ನೀಡಲು ರೋಗಿಗಳಿಂದ ಹಣ ಪಡೆಯುತ್ತಿರುವುದು ಮೇಲ್ನೋಟಕ್ಕೆ ಸಾಬೀತಾಗಿರುತ್ತದೆ. ಇವರು ಭ್ರಷ್ಟಾಚಾರದಲ್ಲಿ ತೊಡಗಿರುವುದು ಇವರ ಈ ವರ್ತನೆಯಿಂದ ಸಾರ್ವಜನಿಕರಲ್ಲಿ ಹಾಗೂ ಸಾಮಾಜಿಕ ಜಾಲತಾಣದಲ್ಲಿ ಇಲಾಖೆಯ ಬಗ್ಗೆ ಋಣಾತ್ಮಕ ಅಭಿಪ್ರಾಯವುಂಟಾಗಿರುತ್ತದೆ. ಇವರು ಸರ್ಕಾರಿ ವೈದ್ಯರಿಗೆ ತಕ್ಕದಲ್ಲದ ರೀತಿಯಲ್ಲಿ ವರ್ತಿಸಿ ದುರ್ನಡತೆ ಎಸಗಿರುತ್ತಾರೆ. ಇವರ ಕರ್ತವ್ಯಲೋಪ ಹಾಗೂ ದುರ್ನಡತೆಯನ್ನು ಗಂಭೀರವಾಗಿ ಪರಿಗಣಿಸಿ, ಇವರನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ಇಲಾಖಾ ವಿಚಾರಣೆ ಬಾಕಿಯಿರಿಸಿ ಸೇವೆಯಿಂದ ಅಮಾನತ್ತುಗೊಳಸಲು ತೀರ್ಮಾನಿಸಿದೆ. ಆದುದರಿಂದ ಈ ಆದೇಶ.

**ಆದೇಶ ಸಂಖ್ಯೆ: ಡಿಪಿಜಿ/ಮೈವಿ/ಮೈ/09/2023-24, ದಿನಾಂಕ** : 4.7.23

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳಿಗಾಗಿ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ)1957ರ ನಿಯಮ 10(1)(ಡಿ) ಮೇರೆಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಡಿ. ರಂದೀಪ್ ಭಾ.ಆ.ಸೇ.,ಆಯುಕ್ತರು, ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು ಆದ ನಾನು, ಡಾ॥ ಕೋಮಲ ಕೆ.ಪಿ., ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಶಾಂತಿನಗರ, ಮೈಸೂರು, ಮೈಸೂರು ಜಿಲ್ಲೆ ಇವರ ವಿರುದ್ಧದ ಕರ್ತವ್ಯಲೋಪ ಹಾಗೂ ದುರ್ನಡತೆ ಆರೋಪದ ಬಗ್ಗೆ ಶಿಸ್ತುಕ್ರಮ ಬಾಕಿಯಿರಿಸಿ, ಈ ತಕ್ಷಣದಿಂದ ಜಾರಿಗೆ ಬರುವಂತೆ ಸರ್ಕಾರಿ ಸೇವೆಯಿಂದ ಅಮಾನತ್ತುಗೊಳಿಸಿರುತ್ತೇನೆ. ಸದರಿ ವೈದ್ಯರು ಅಮಾನತ್ತಿನ ಅವಧಿಯಲ್ಲಿ ಜೀವನಾಂಶ ಭತ್ಯೆಯನ್ನು ಪಡೆಯುವ ಸಲುವಾಗಿ ಲೀನ್ ಅನ್ನು ಪ್ರಾಥಮಿಕ ಆರೋಗ್ಯ ಕೇಂದ್ರ, ಬಿಲಗುಂದ, ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆ ಇಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳ ಹುದ್ದೆಗೆ ಸ್ಥಳಾಂತರಿಸಲಾಗಿದೆ.

ಸದರಿ ವೈದ್ಯರು ಅಮಾನತ್ತಿನ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿಯನ್ನು ಪಡೆಯದೆ ಕೇಂದ್ರ ಸ್ಥಾನವನ್ನು ಬಿಡತಕ್ಕದಲ್ಲವೆಂದು ಆದೇಶಿಸಿದೆ.

4.7.23

(ಡಿ. ರಂದೀಪ್)
ಆಯುಕ್ತರು,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು,
ಬೆಂಗಳೂರು.

ಗೆ,
ಡಾ॥ ಕೋಮಲ,
ವೈದ್ಯಾಧಿಕಾರಿ,
ಪ್ರಾಥಮಿಕ ಆರೋಗ್ಯ ಕೇಂದ್ರ, ಶಾಂತಿನಗರ,
ಮೈಸೂರು, ಮೈಸೂರು ಜಿಲ್ಲೆ.

2..

<u>ಪ್ರತಿಯನ್ನು ಈ ಕೆಳಕಂಡವರ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ/ರವಾನಿಸಿದೆ:</u>

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ ವೃತ್ತ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಮೈಸೂರು ಜಿಲ್ಲೆ, ನಜರ್‌ಬಾದ್, ಮೈಸೂರು-57001 ಮೈಸೂರು-57001 ಇವರು ವೈದ್ಯರಿಗೆ ಅಮಾನತ್ತಿನ ಆದೇಶವನ್ನು ಜಾರಿ ಮಾಡಿ ಸ್ವೀಕೃತಿ ಸಲ್ಲಿಸಲು ಸೂಚಿಸಿದೆ.
4. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯ.
5. ಆಡಳಿತ ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಶಾಂತಿನಗರ, ಮೈಸೂರು, ಮೈಸೂರು ಜಿಲ್ಲೆ.
6. ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಬಿಲಗುಂದ, ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆ.
7. ಕಛೇರಿ ಅಧೀಕ್ಷಕರು, ಹೆಚ್.ಆರ್.ಓ./ಜೆ.ಆರ್.ಓ.ಸಂಕಲನ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
8. ಆದೇಶದ ಪ್ರತಿ / ಕಛೇರಿ ಪ್ರತಿ.